**ಓ ಎಸ್ ನಂಃ 11/2015**

**ಪಿ. ಡಬ್ಲ್ಯೂ ಃ 3**

**ದಿಃ 05.12.2022 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋದಿಸಲಾಯಿತು.**

**ಪಾಟೀ ಸವಾಲು ಃ ಪ್ರತಿವಾದಿ ಪರ ಶ್ರೀ ಎನ್ ಆರ್ ಎಸ್ ವಕೀಲರಿಂದ ಃ**

1 ನೇ ವಾದಿಯು ಜಮೀನಿನ ವಿಚಾರದಲ್ಲಿ ಸಾಕ್ಷಿ ಹೇಳಲು ನನ್ನನ್ನು ಕರೆದುಕೊಂಡು ಬಂದಿದ್ದಾರೆ. ವಾದಿ ಮತ್ತು ಪ್ರತಿವಾದಿಗಳು ಮೊದಲು ಒಟ್ಟಿಗೆ ಇದ್ದರು. ಈಗ ಬೇರೆ ಬೇರೆ ಮಾಡಿಕೊಂಡು ತಿನ್ನುತ್ತಿದ್ದಾರೆ ಎಂದು ಸಾಕ್ಷಿ ಹೇಳುತ್ತಾರೆ. ಈಗ 30 ವರ್ಷಗಳಿಂದ ಅವರು ಪ್ರತ್ಯೇಕವಾಗಿ ವಾಸವಾಗಿದ್ದಾರೆ ಎಂದರೆ ಸರಿಯಲ್ಲ. 2/3 ವರ್ಷಗಳಿಂದ ಪ್ರತ್ಯೇಕವಾಗಿ ವಾಸವಾಗಿದ್ದಾರೆ. ನನಗೆ ಓದಲು ಬರೆಯಲು ಬರುವುದಿಲ್ಲ. ಮುಖ್ಯ ವಿಚಾರಣೆಯಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತಿಲ್ಲ. ವಾದಿಗಳು ಯಾವ ಉದ್ದೇಶಕ್ಕಾಗಿ ದಾವೆ ಮಾಡಿದ್ದಾರೆ ಎಂದು ಗೊತ್ತಿಲ್ಲ. ದಾವಾ ಸ್ವತ್ತುಗಳ ಸ.ನಂ, ವಿಸ್ತೀರ್ಣ ಮತ್ತು ಚೆಕ್ ಬಂದಿ ಗೊತ್ತಿಲ್ಲ.

ವಾದಿಗಳು ದಾವೆಯನ್ನು ಧನಂಜಯ್ ಇವರ ಮಕ್ಕಳ ವಿರುದ್ದ ಹಾಕಿದ್ದಾರೆ. ಪ್ರತಿವಾದಿ 1 ಮತ್ತು 2 ರವರು ಪ್ರತ್ಯೇಕವಾಗಿ ವಾಸವಾಗಿದ್ದು ಪ್ರತ್ಯೇಕ ಸ್ವತ್ತುಗಳ ಸ್ವಾಧೀನದಲ್ಲಿದ್ದಾರೆ ಎಂದರೆ ಸರಿ. ಅದೇ ರೀತಿ ಪ್ರತಿವಾದಿ 3 ರಿಂದ 5 ರವರು ಪ್ರತ್ಯೇಕವಾಗಿ ವಾಸವಾಗಿದ್ದು ಪ್ರತ್ಯೇಕ ಸ್ವತ್ತುಗಳ ಸ್ವಾಧೀನದಲ್ಲಿದ್ದಾರೆ ಎಂದರೆ ಸರಿ. ಅದೇ ರೀತಿ ವಾದಿಗಳು ಪ್ರತ್ಯೇಕ ಮನೆಗಳಲ್ಲಿ ವಾಸವಾಗಿದ್ದಾರೆ ಎಂದರೆ ಸರಿ. ವಾದಿಗಳ ಜೊತೆ ಚೆನ್ನಾಗಿದ್ದೇನೆ ಎಂದರೆ ಸರಿ. ವಾದಿಗಳಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಪ್ರಮಾಣಪತ್ರ ಸಲ್ಲಿಸಿ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.



**ಪಾಟೀ ಸವಾಲು ಃ ಪ್ರತಿವಾದಿ 6 ರಿಂದ 8 ರವರ ಪರ ಶ್ರೀ ಎಸ್ ಪಿ ಕೆ ವಕೀಲರಿಂದ ಃ**

ದಾವಾ ಸ್ವತ್ತುಗಳ ಅಕ್ಕಪಕ್ಕದಲ್ಲಿ ನನ್ನ ಸ್ವತ್ತುಗಳಿರುವುದಿಲ್ಲ. ದಾವಾ ಐಟಂ ನಂಬರ್ 1 ರಿಂದ 5 ಇವುಗಳಲ್ಲಿ ಕ್ರಯದಾರರು ಮುಳ್ಳು ತಂತಿಗಳನ್ನು ಹಾಕಿಕೊಂಡು ಹಣ್ಣಿನ ಮರಗಳನ್ನು ಮತ್ತು ಸಿಲ್ವರ್ ಓಕ್ ಮರಗಳನ್ನು ಹಾಕಿಕೊಂಡು ಸ್ವಾಧೀನದಲ್ಲಿದ್ದಾರೆ ಎಂದರೆ ಸರಿ. ಸ.ನಂ. 213 ರಲ್ಲಿ ಕ್ರಯದಾರರು ಸ್ವಾದೀನದಲ್ಲಿರುತ್ತಾರೆ ಎಂದರೆ ಸರಿಯಲ್ಲ. ವಾದಿ ಮತ್ತು ಪ್ರತಿವಾದಿ ಗಳ ಕುಟುಂಬದಲ್ಲಿ ದಾವಾ ಸ್ವತ್ತುಗಳನ್ನು ಯಾರು ಯಾರಿಗೆ ಮಾರಾಟ ಮಾಡಿದ್ದಾರೆ ಎಂದು ಗೊತ್ತಿಲ್ಲ. ವಾದಿಗಳ ಜೊತೆ ನಾನು ಚೆನ್ನಾಗಿರುವುದರಿಂದ ಅವರ ಪರವಾಗಿ ನಾನು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನನಗೆ ವಿಷಯ ಗೊತ್ತಿಲ್ಲದೆ ಇದ್ದರೂ ಸಹ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರುವಿಚಾರಣೆ : ಇಲ್ಲ**

**(ಉಕ್ತ ಲೇಖನವನ್ನು ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)**

**ಓ ಹೇ ಕೇ ಸ ಇ ಎ ಓ**

**ಹಿರಿಯ ಶ್ರೇಣಿ ಸಿವಿಲ್ ನ್ಯಾಯಾಧೀಶರು,**
**ಮಾಗಡಿ.**